**<u>ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ ಪ್ರ.ದ.ನ್ಯಾದಂ., ರವರ ನ್ಯಾಯಾಲಯ, ತರೀಕೆರೆ</u>**

**<u>ಸಂಚಾರಿ ನ್ಯಾಯಾಲಯ, ಅಜ್ಜಂಪುರ</u>**

**<u>ಸಿ.ಸಿ.ನಂಃ 1318/2024</u>**

**<u>ಫಿರ್ಯಾದುದಾರರುಃ</u>** ಸರ್ಕಾರದ ಪರವಾಗಿ ಅಜ್ಜಂಪುರ ಪೊಲೀಸರು

**-: ವಿರುದ್ಧ :-**

**<u>ಆರೋಪಿ :</u>** ಶ್ರೀ ಬಸವರಾಜು,

ಬಿನ್ ಶ್ರೀ ಶೇಖರಪ್ಪ,
30 ವರ್ಷಗಳು,
ವಾಸಃ ಸೊಲ್ಲಾಪುರ ಗ್ರಾಮ,
ಅಜ್ಜಂಪುರ ತಾಲ್ಲೂಕು.

**<u>ದೋಷಾರೋಪಣೆ</u>**

ಶ್ರೀ. ರಾಹುಲ್ ಶೆಟ್ಟಿಗಾರ್, ಬಿ.ಕಾಂ.(Hons.), ಎಲ್ಎಲ್.ಬಿ., ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ ಪ್ರ.ದ.ನ್ಯಾದಂ., ತರೀಕೆರೆ ಆದ ನಾನು ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

ದಿನಾಂಕ 01.05.2024 ರಂದು ರಾತ್ರಿ 12.20 ಗಂಟೆ ಸಮಯದಲ್ಲಿ ಅಜ್ಜಂಪುರ ಪೋಲೀಸ್ ಠಾಣಾ ಸರಹದ್ದಿನ ಸೋಲ್ಲಾಪುರ ಗ್ರಾಮದಲ್ಲಿ ನೀವು ಆರೋಪಿ ನಿಮ್ಮ ಮನೆಗೆ ಬಂದಾಗ ಚಾಸಾ-1/ ಶ್ರೀಮತಿ ಶೋಭಾರವರು ಯಾಕೆ ಪ್ರತಿದಿನ ತಡವಾಗಿ ಮನೆಗೆ ಬರುತ್ತೀಯಾ ಎಂದು ಇನ್ನು ಮುಂದೆ ನೇತ್ರಾವತಿಯ ಮನೆಗೆ ಹೋಗಲು ನಿಮಗೆ ಬಿಡುವುದಿಲ್ಲವೆಂದು ಹೇಳಿದ್ದಕ್ಕೆ ನೀವು ಆರೋಪಿ ಚಾಸಾ-1 ರವರಿಗೆ ದೈಹಿಕ ಮತ್ತು ಮಾನಸಿಕ ಹಿಂಸೆ ನೀಡಿರುತ್ತೀರಿ. ಈ ರೀತ್ಯ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ 498(ಎ) ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಎರಡನೇಯದಾಗಿ ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ ನೀವು ಆರೋಪಿ ಕೈಯಿಂದ ಚಾಸಾ-1 ರವರ ಕೆನ್ನೆಗೆ ಹೊಡೆದಿರುತ್ತೀರಿ ಮತ್ತು ಅವರಿಗೆ ಸಾಮಾನ್ಯ ಸ್ವರೂಪದ ನೋವುಂಟು ಮಾಡಿರುತ್ತೀರಿ. ಈ ರೀತ್ಯ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ 323 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಮೂರನೇಯದಾಗಿ ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ ನೀವು ಆರೋಪಿ ವೇಲ್‌ನಿಂದ ಚಾಸಾ-1 ರವರ ಎರಡೂ ಕೈಗಳನ್ನು ಹಿಂದಕ್ಕೆ ಕಟ್ಟಿ ನೀನು ಸಾಯಿ ಎಂದು ಹೆದರಿಸಿರುತ್ತೀರಿ. ಈ ರೀತ್ಯ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ 506 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ನಾಲ್ಕನೇಯದಾಗಿ ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ ನೀವು ಆರೋಪಿ ಕಬ್ಬಿಣದ ರಾಡಿನಿಂದ ಚಾಸಾ-1 ರವರ ಎಡಭಾಗದ ಕೈಗೆ ಹಾಗೂ ಮೈಕೈಗೆ ಹೊಡೆದಿರುತ್ತೀರಿ ಮತ್ತು ಅವರಿಗೆ ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿರುತ್ತೀರಿ. ಈ ರೀತ್ಯ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ 324 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಕೊನೆಯದಾಗಿ ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ ನೀವು ಆರೋಪಿ ಚಾಸಾ-1 ರವರ ಶಾಂತಿಭಂಗ ಮಾಡುವ ಉದ್ದೇಶದಿಂದ ಅವಾಚ್ಯ ಶಬ್ದಗಳಿಂದ ಬೈದು ಅವಮಾನಿಸಿರುತ್ತೀರಿ. ಈ ರೀತ್ಯ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ 504 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಸದರಿ ಮೇಲ್ಕಂಡ ಆರೋಪಿಯಾದ ನೀವು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮೇಲೆ ಹೇಳಿದ ಅಪರಾದಗಳನ್ನು ಮಾಡಿದ್ದರಿಂದ, ಅವುಗಳು ಈ ನ್ಯಾಯಾಲಯದಿಂದ ವಿಚಾರಣೆ ಆಗತಕ್ಕದ್ದೆಂದು ಆದೇಶಿಸಲಾಗಿದೆ.

ಪ್ರಃ1. ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದಿರಾ? ಅವುಗಳು ನಿಮಗೆ ಅರ್ಥವಾಯಿತೇ?
ಆರೋಪಿ ಉತ್ತರಃ Yes

ಪ್ರಃ2. ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?
ಆರೋಪಿ ಉತ್ತರಃ Pleaded not guilty and claimed to be tried

(ಆರೋಪಿಗೆ ದೋಷಾರೋಪಣೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ತಿಳಿಸಿ ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ)

ದಿನಾಂಕ : 03.07.2025

ಸಹಿ/-
(ರಾಹುಲ್ ಶೆಟ್ಟಿಗಾರ್)
ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ
ಪ್ರ.ದ.ನ್ಯಾದಂ., ತರೀಕೆರೆ.
(ಸಂಚಾರಿ ನ್ಯಾಯಾಲಯ, ಅಜ್ಜಂಪುರ)

ಆರೋಪಿ ಸಹಿಃ